ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಲವ್ ಜಿಹಾದ್ ಕಾನೂನು ಜಾರಿಗೆ ತರುವ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

378(430) ಮಾನ್ಯ ಗೃಹ ಮತ್ತು ಕಾನೂನು ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಲವ್ ಜಿಹಾದ್ ಕುರಿತು ಸರ್ಕಾರದ ನಿಲುವೇನು; ಮಾನ್ಯ ನ್ಯಾಯಾಲಯವು ಮದುವೆಯ ಕಾರಣಕ್ಕಾಗಿ ಮತಾಂತರವಾಗುವುದನ್ನು ಅಸಿಂಧು ಎಂದು ಘೋಷಿಸಿದ್ದು, ಇಂತಹ ಮದುವೆಗಳ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಆ) ಕಳೆದ 8 ವರ್ಷಗಳಲ್ಲಿ ರಾಜ್ಯದಲ್ಲಿ ಅಂತರ್ ಧರ್ಮೀಯ ವಿವಾಹವಾಗಿ ಪರಿತ್ಯಕ್ತರಾದ ಹೆಣ್ಣು ಮಕ್ಕಳ ಸಂಖ್ಯೆ ಎಷ್ಟು; ಈ ಮಹಿಳೆಯರ ಸಂರಕ್ಷಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಧರ್ಮವನ್ನು ಮುಚ್ಚಿಟ್ಟು ಸುಳ್ಳು ಹೇಳಿ ಮದುವೆಯಾಗಿ ಆ ಬಳಿಕ ಹುಡುಗ ಮೋಸ ಮಾಡಿದ ಎಂಬ ಕಾರಣಕ್ಕೆ ಆತ್ಮಹತ್ಯೆ ಮಾಡಿಕೊಂಡ ಹೆಣ್ಣು ಮಕ್ಕಳ ಸಂಖ್ಯೆ ಎಷ್ಟು; ಆತ್ಮಹತ್ಯೆಗೆ ಕಾರಣರಾದ ವ್ಯಕ್ತಿಯ ಮೇಲೆ ಯಾವ ಕಾನೂನು ಕ್ರಮ ಕೈಗೊಳ್ಳಲಾಗಿದೆ ?